ಕರ್ನಾಟಕ ಸರ್ಕಾರ
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಸಂಖ್ಯೆ:ಯುಸೇಇ/ರಾಸೇಯೋ/18/2025-26/430

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:12.12.2025

ಇವರಿಗೆ,

ಕಾರ್ಯಕ್ರಮ ಸಂಯೋಜನಾಧಿಕಾರಿಗಳು,
ರಾಷ್ಟ್ರೀಯ ಸೇವಾ ಯೋಜನೆಯ ಅನುಷ್ಠಾನದಲ್ಲಿರುವ,
ಎಲ್ಲಾ ವಿಶ್ವವಿದ್ಯಾಲಯ/ನಿರ್ದೇಶನಾಲಯಗಳು.

ಮಾನ್ಯರೇ,

ವಿಷಯ: ಶ್ರೀ ವಿ.ಎಸ್.ಉಗ್ರಪ್ಪ ಸಮಿತಿ ನೀಡಿರುವ ಶಿಫಾರಸ್ಸುಗಳ ಕುರಿತು ಕೈಗೊಂಡ ಕ್ರಮಗಳ ಬಗ್ಗೆ ವಿವಿಧ ಇಲಾಖೆಗಳೊಂದಿಗೆ ದಿನಾಂಕ:23.10.2025ರಂದು ನಡೆದ ಪರಿಶೀಲನಾ ಸಭೆಯಲ್ಲಿ ತಿಳಿಸಿರುವಂತೆ ಬಾಲ್ಯ ರಕ್ಷಣಾ ಪಡೆಯನ್ನು ರಚಿಸುವ ಕುರಿತು.

ಉಲ್ಲೇಖ:1. ಸರ್ಕಾರದ ಅಧೀನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ:ವೈಎಸ್‌ಡಿ-ಸಿಡಿಎನ್/9/2025, ದಿನಾಂಕ:03.12.2025.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ **ದಿನಾಂಕ:23.10.2025ರಂದು ಶ್ರೀ ವಿ.ಎಸ್. ಉಗ್ರಪ್ಪ ಸಮಿತಿ ನೀಡಿರುವ ಶಿಫಾರಸ್ಸುಗಳ ಕುರಿತು ಕೈಗೊಂಡ ಕ್ರಮಗಳ ಕುರಿತು ವಿವಿಧ ಇಲಾಖೆಗಳೊಂದಿಗೆ ನಡೆದ ಪರಿಶೀಲನಾ ಸಭೆಯಂತೆ ಕ್ರಮ ಸಂಖ್ಯೆ:10 ರಲ್ಲಿ ಎನ್.ಎಸ್.ಎಸ್. ನಲ್ಲಿರುವ ವಿದ್ಯಾರ್ಥಿಗಳನ್ನು ಪೋಲೀಸ್ ಠಾಣೆಗಳಲ್ಲಿ ನೋಂದಣಿ ಮಾಡಿ ಬಾಲ್ಯ ರಕ್ಷಣಾ ಪಡೆಯನ್ನು ರಚಿಸುವಂತೆ** ಸೂಚಿಸಿರುತ್ತಾರೆ.(ಪ್ರತಿ ಲಗತ್ತಿಸಿದೆ)

ಆದ್ದರಿಂದ, ತಮ್ಮ ವಿಶ್ವವಿದ್ಯಾಲಯ/ನಿರ್ದೇಶನಾಲಯದ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ/ಶಿಕ್ಷಣ ಸಂಸ್ಥೆಗಳು ಎನ್. ಎಸ್. ಎಸ್. ಸ್ವಯಂ ಸೇವಕ/ಸೇವಕಿಯರು ಹಾಗೂ ವಿದ್ಯಾರ್ಥಿಗಳು ಕಾಲೇಜುಗಳ ಹತ್ತಿರ ಇರುವ ಪೋಲೀಸ್ ಠಾಣೆಗಳಿಗೆ ಭೇಟಿ ನೀಡಿ ಬಾಲ್ಯ ರಕ್ಷಣಾ ಪಡೆಯ ರಚನೆಯ ಕುರಿತು ಮಾಹಿತಿ ಪಡೆದು ಸದರಿ ಪಡೆಗೆ ನೋಂದಾಯಿಸಿಕೊಳ್ಳುವಂತೆ ಅಗತ್ಯ ಕ್ರಮವಹಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

**(ಡಾ. ಪ್ರತಾಪ್ ಲಿಂಗಯ್ಯ)**
ರಾಜ್ಯ ಎನ್.ಎಸ್.ಎಸ್. ಅಧಿಕಾರಿ,
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ವೈಎಸ್‌ಡಿ-ಸಿಡಿಎನ್/9/2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ|| ಬಿ.ಆರ್.ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ:03.12.2025

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,
ಬೆಂಗಳೂರು.

ಇವರಿಗೆ:

ರಾಜ್ಯ ಎನ್.ಎಸ್.ಎಸ್. ಅಧಿಕಾರಿ,
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

1140193/2025/04/12/2025

ಮಾನ್ಯರೆ,

<u>ವಿಷಯ:</u> ಶ್ರೀ ವಿ.ಎಸ್.ಉಗ್ರಪ್ಪ ಸಮಿತಿ ನೀಡಿರುವ ಶಿಫಾರಸ್ಸುಗಳ ಕುರಿತು ಕೈಗೊಂಡ ಕ್ರಮಗಳ ಬಗ್ಗೆ ವಿವಿಧ ಇಲಾಖೆಗಳೊಂದಿಗೆ ದಿನಾಂಕ:23.10.2025 ರಂದು ನಡೆದ ಪರಿಶೀಲನಾ ಸಭೆಯ ನಡವಳಿಯನ್ನು ಕಳುಹಿಸುವ ಬಗ್ಗೆ.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:23.10.2025ರಂದು ಶ್ರೀ ವಿ.ಎಸ್.ಉಗ್ರಪ್ಪ ಸಮಿತಿ ನೀಡಿರುವ ಶಿಫಾರಸ್ಸುಗಳ ಕುರಿತು ಕೈಗೊಂಡ ಕ್ರಮಗಳ ಕುರಿತು ವಿವಿಧ ಇಲಾಖೆಗಳೊಂದಿಗೆ ನಡೆದ ಪರಿಶೀಲನಾ ಸಭೆಯ ನಡವಳಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ನಡವಳಿಯ ಕ್ರಮ ಸಂಖ್ಯೆ:10ರಲ್ಲಿ ಎನ್.ಎಸ್.ಎಸ್‌ನಲ್ಲಿರುವ ವಿದ್ಯಾರ್ಥಿಗಳನ್ನು ಪೊಲೀಸ್ ಠಾಣೆಗಳಲ್ಲಿ ನೊಂದಣಿ ಮಾಡಿ ಬಾಲ್ಯ ರಕ್ಷಣಾ ಪಡೆಯನ್ನು ರಚಿಸುವಂತೆ ಕೋರಿದ್ದು, ಅದರಂತೆ ತುರ್ತು ಕ್ರಮ ಕೈಗೊಂಡು ಅನುಪಾಲನಾ ವರದಿ ಸಲ್ಲಿಸುವಂತೆ ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Digitally signed by
JAHEEDA N GACHHINMAHAL
Date: 03-12-2025 11:13:01

**( ಜಹೀದಾ ಎನ್. ಗಚ್ಚಿನಮಹಲ )**
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಸ್ವೀಕರಿಸಲಾಗಿದೆ
827/04/12/2025
ರಾಷ್ಟ್ರೀಯ ಸೇವಾ ಯೋಜನಾ ಕೋಶ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ಕರ್ನಾಟಕ ಸರ್ಕಾರ, ಬೆಂಗಳೂರು.

**ದಿನಾಂಕ: 23-10-2025ರಂದು ಮಧ್ಯಾಹ್ನ 12.30ಕ್ಕೆ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಶ್ರೀ ವಿ.ಎಸ್. ಉಗ್ರಪ್ಪ ಸಮಿತಿ ನೀಡಿರುವ ಶಿಫಾರಸ್ಸುಗಳ ಕುರಿತು ಕೈಗೊಂಡ ಕ್ರಮಗಳ ಕುರಿತು ವಿವಿಧ ಇಲಾಖೆಗಳೊಂದಿಗೆ ನಡೆದ ಪರಿಶೀಲನಾ ಸಭೆಯ ನಡವಳಿಗಳು:**

**ಸಭೆಯಲ್ಲಿ ಹಾಜರಿದ್ದವರ ಪಟ್ಟಿ ಲಗತ್ತಿಸಿದೆ.**

ದಿನಾಂಕ: 21-07-2025ರಂದು ನಡೆದಿದ್ದ ಸಭೆಯ ಅನುಪಾಲನಾ ವರದಿಯನ್ನು ಪರಿಶೀಲಿಸಲಾಯಿತು. ನಂತರ ಸಭೆಯಲ್ಲಿ ಹಾಜರಿದ್ದ ಇಲಾಖೆಯ ಅಧಿಕಾರಿಗಳಿಗೆ ಈ ಕೆಳಕಂಡ ಸೂಚನೆಗಳನ್ನು ನೀಡಲಾಯಿತು:

1. ಆನ್‌ಲೈನ್ ಮೂಲಕ ವಿವಾಹ ನೋಂದಣಿಗಳ ಅಂಕಿ ಅಂಶಗಳನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪಡೆದು ಸಲ್ಲಿಸಲು ಸೂಚಿಸಲಾಗಿತ್ತು. ರಾಷ್ಟ್ರೀಯ ಜೀವನೋಪಾಯ ಮಿಷನ್ ಅಡಿಯಲ್ಲಿ ನಡೆಸಲಾಗುತ್ತಿರುವ ಪರಿವರ್ತನಾ ಅಭಿಯಾನದಲ್ಲಿ 30 ಸಾವಿರಕ್ಕೂ ಹೆಚ್ಚು ಗ್ರಾಮಗಳಲ್ಲಿ ಸುಮಾರು 50,000 ಸಾವಿರ ಕಾರ್ಯಕ್ರಮಗಳನ್ನು ನಡೆಸಲಾಗಿದ್ದು, ವಾರ್ಷಿಕವಾಗಿ ವಿವಾಹ ನೋಂದಣಿಯಾದ ಅಂಕಿ ಅಂಶಗಳ ಆಧಾರದ ಮೇಲೆ ನೋಂದಣಿ ಕಡಿಮೆ ಇರುವ ಜಿಲ್ಲೆಗಳಲ್ಲಿ ಈ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಲು ಸೂಚಿಸಲಾಯಿತು.

**ಕ್ರಮ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ನೋಂದಣಿ ಮತ್ತು ಮುದ್ರಾಂಕ ಇಲಾಖೆ.**

2. 2023-24 ರಲ್ಲಿ 143, 2024-25ರಲ್ಲಿ 150 ಹಾಗೂ ಪ್ರಸಕ್ತ ಸಾಲಿನ ಸೆಪ್ಟೆಂಬರ್-2025 ರ ಅಂತ್ಯದವರೆಗೆ 155 ಬಾಲ್ಯ ವಿವಾಹ ಪ್ರಕರಣಗಳಲ್ಲಿ ಪ್ರಥಮ ವರ್ತಮಾನ ವರದಿ (FIR)ಗಳು ದಾಖಲಾಗಿದ್ದು, ಈ ಕುರಿತು ಕೈಗೊಂಡ ಕ್ರಮದ ವರದಿಯನ್ನು ನೀಡುವಂತೆ ಸೂಚಿಸಲಾಯಿತು.

**ಕ್ರಮ: ಮಕ್ಕಳ ರಕ್ಷಣಾ ನಿರ್ದೇಶನಾಲಯ ಮತ್ತು ಒಳಾಡಳಿತ ಇಲಾಖೆ**

3. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನವನ್ನು ನಿಷೇಧಿಸುವ, "ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ನಿಯಂತ್ರಣ ಕಾಯ್ದೆ, 2003 (ವ್ಯಾಪಾರ ಮತ್ತು ವಾಣಿಜ್ಯ, ಉತ್ಪಾದನೆ, ಪೂರೈಕೆ ಮತ್ತು ವಿತರಣೆಯ ಜಾಹೀರಾತು ಮತ್ತು ನಿಯಂತ್ರಣ) (COTPA)" ಅಡಿಯಲ್ಲಿ ಏಪ್ರಿಲ್ ನಿಂದ ಸೆಪ್ಟೆಂಬರ್-2025




le No. YSD-CDN/9/2025-YSD_CORD-YOUTH SEC (Computer No. 1643182)

ತಿಂಗಳವರೆಗೆ ಸುಮಾರು 1,82,000 ಜನರು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿದ್ದಾರೆ. ಶಾಲಾ/ಕಾಲೇಜುಗಳಲ್ಲಿ 100 ಮೀ. ವ್ಯಾಪ್ತಿಯಲ್ಲಿ 2470 ಜನರು ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿದ್ದಾರೆ. ಇವರಿಗೆ ದಂಡ ವಿಧಿಸಲಾಗಿದೆ, ಇದರಿಂದಾಗಿ ರೂ. 45 ಲಕ್ಷ ಪ್ರತಿ ವರ್ಷ ದಂಡ ಸಂಗ್ರಹವಾಗುತ್ತಿದೆ. ಈ ಪೈಕಿ, 21 ವರ್ಷದೊಳಗಿನ ಯುವಜನರ ದತ್ತಾಂಶವನ್ನು ನೀಡಲು ಆರೋಗ್ಯ ಇಲಾಖೆಗೆ ಸೂಚಿಸಲಾಯಿತು.

**ಕ್ರಮ:ಗೃಹ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಅಬಕಾರಿ ಇಲಾಖೆ**

4. 21 ವರ್ಷದೊಳಗಿನ ಯುವಜನರನ್ನು ಧೂಮಪಾನ, ಮದ್ಯಪಾನ, ತಂಬಾಕು ಸೇವನೆ, ಡ್ರಗ್ಸ್ ಸೇವೆಯಂತಹ ಮಾದಕ ವಸ್ತುಗಳ ಸೇವನೆಯಿಂದ ವ್ಯಸನ ಮುಕ್ತರನ್ನಾಗಿಸಲು ಮಾದಕ ವಸ್ತು ವ್ಯಸನ ಮುಕ್ತ ಕೇಂದ್ರಗಳ ಮೂಲಕ ಏಪ್ರಿಲ್ ನಿಂದ ಸೆಪ್ಟೆಂಬರ್-2025ರವರೆಗೆ ಸುಮಾರು 1 ಲಕ್ಷ ಯುವಜನರಿಗೆ ಸಮಾಲೋಚನೆಯನ್ನು ನೀಡಲಾಗುತ್ತಿದೆ. ಆರೋಗ್ಯ ಇಲಾಖೆ ಮತ್ತು ನಿಮ್ಹಾನ್ಸ್ ಸಹಯೋಗದಲ್ಲಿ ಟೆಲಿಮಾನಸ್ 14416 ಎಂಬ ಸಹಾಯವಾಣಿಯು ಕಾರ್ಯಾಚರಣೆ ಮಾಡುತ್ತಿದೆ. ಈ ಸಹಾಯವಾಣಿ ಮೂಲಕ ಮಾದಕ ವ್ಯಸನ ಪೀಡಿತ ಮಕ್ಕಳ ಮುಂದಿನ ಭವಿಷ್ಯವನ್ನು ಸುಧಾರಿಸಲು ಅಗತ್ಯ ಸಹಾಯ ಮತ್ತು ಸಮಾಲೋಚನೆಯನ್ನು ಪಡೆಯಬಹುದಾಗಿದೆ. ಈ ವಿಷಯವನ್ನು ಜನಸಾಮಾನ್ಯರಲ್ಲಿ ಹೆಚ್ಚು ಪ್ರಚಾರ ಮಾಡಬೇಕಾಗಿದ್ದು, ಮುಖ್ಯ ಕಾರ್ಯದರ್ಶಿಯವರಿಂದ ಜನರಿಗೆ ಈ ಸಹಾಯವಾಣಿಯನ್ನು ಸಂಪರ್ಕಿಸುವಂತೆ ಒಂದು ಸಂದೇಶವನ್ನು ನೀಡುವುದು.

**ಕ್ರಮ:ಗೃಹ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಅಬಕಾರಿ ಇಲಾಖೆ**

5. ಶಕ್ತಿ ಸದನ ಹಾಗೂ ಆಶ್ರಯ ಕೇಂದ್ರ (Shelter Homes)ಗಳಲ್ಲಿ ವಾಸಿಸುವ ಮಹಿಳೆಯರಿಗೆ ರಾಷ್ಟ್ರೀಯ ಜೀವನೋಪಾಯ ಅಭಿಯಾನ (NLM) ರವರಿಂದ ಅಗತ್ಯವಿರುವ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಹಾಗೂ ವಸತಿ ರಹಿತರಿಗೆ ರಾಜೀವ್ ಗಾಂಧಿ ವಸತಿ ನಿಗಮದಿಂದ ವಸತಿ ಸೌಲಭ್ಯ ಕಲ್ಪಿಸುವ ಬಗ್ಗೆ ಕ್ರಮವಹಿಸಲು ಸೂಚಿಸಲಾಯಿತು.

**ಕ್ರಮ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ರಾಜೀವ್ ಗಾಂಧಿ ವಸತಿ ನಿಗಮ**

6. ಮಾನ್ಯ ಅಧ್ಯಕ್ಷರು, ರಾಷ್ಟ್ರೀಯ ಮಹಿಳಾ ಆಯೋಗ, ರವರು ಸೂಚಿಸಿದಂತೆ ನವೆಂಬರ್-2025 ರ ಮಾಹೆಯಲ್ಲಿ ಎಲ್ಲಾ ಜಿಲ್ಲೆಗಳ ಸ್ಥಳೀಯ ದೂರು ಸಮಿತಿ (LCC) ರವರಿಗೆ ಕಾರ್ಯಾಗಾರವನ್ನು ರಾಜ್ಯ ಮಹಿಳಾ ಆಯೋಗದಿಂದ ಹಮ್ಮಿಕೊಳ್ಳಲು ಸೂಚಿಸಲಾಯಿತು.

**ಕ್ರಮ: ಕರ್ನಾಟಕ ರಾಜ್ಯ ಮಹಿಳಾ ಆಯೋಗ**

7. ದೃಶ್ಯ ಮಾಧ್ಯಮಗಳು ಅತ್ಯಾಚಾರ, ಮಹಿಳಾ ದೌರ್ಜನ್ಯ ಆತ್ಮಹತ್ಯೆ ಮತ್ತು ಇತರ ಪ್ರಕರಣಗಳನ್ನು ವೈಭವೀಕರಿಸಿ ಭಯಗೊಳ್ಳುವಂತೆ ಪ್ರಸಾರ ಮಾಡುವುದನ್ನು ನಿಯಂತ್ರಿಸಬೇಕು, ಪ್ರೆಸ್ ಕೌನ್ಸಿಲ್ ಮಾರ್ಗಸೂಚಿಗಳನ್ನು ದೃಶ್ಯ ಮಾಧ್ಯಮಗಳು ಅಳವಡಿಸಿಕೊಳ್ಳಬೇಕು. ಯಾರು ಈ ರೀತಿಯ ಪ್ರಕರಣಳಿಗೆ ಪ್ರಚಾರ ನೀಡುತ್ತಾರೋ, ಅವರ ಮೇಲೆ ಮಹಿಳೆಯರ ಅಸಭ್ಯ ಪ್ರಾತಿನಿಧ್ಯ (ನಿಷೇಧ) ಕಾಯ್ದೆ-1986 (Indescent Representation of Women (Prohibition) Act-1986) ರಡಿಯಲ್ಲಿ ಸ್ವಯಂ ಪ್ರೇರಿತವಾಗಿ ಕ್ರಮವನ್ನು ದೃಶ್ಯ ಮಾಧ್ಯಮಗಳು ತೆಗೆದುಕೊಳ್ಳಬೇಕು. ಅಥವಾ ಕೇಬಲ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮವಹಿಸಲು, ಅಥವಾ ಫಿಲ್ಮ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮ ವಹಿಸಲು, ಪತ್ರಿಕೋದ್ಯಮಕ್ಕೆ ಸಂಬಂಧಿಸಿದ್ದರೆ ಪತ್ರಿಕೋದ್ಯಮ ಕಾಯಿದೆಯಡಿ ಕ್ರಮವಹಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಬೇಕು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಮಹಿಳಾ ಆಯೋಗ ಹಾಗೂ ವಾರ್ತಾ ಇಲಾಖೆಯೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಸೂಚಿಸಲಾಯಿತು.

**ಕ್ರಮ: ಕರ್ನಾಟಕ ರಾಜ್ಯ ಮಹಿಳಾ ಆಯೋಗ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮತ್ತು ಒಳಾಡಳಿತ ಇಲಾಖೆ.**

8. ಮಾಜಿ ದೇವದಾಸಿ ಮಹಿಳೆಯರ ಸಮೀಕ್ಷೆ ಕುರಿತಂತೆ ಜಿಲ್ಲೆಗಳಲ್ಲಿ ಆಗಿರುವ ಪ್ರಗತಿಯ ಅಂಕಿ ಅಂಶಗಳ ಮಾಹಿತಿಯನ್ನು ನೀಡಲು ಸೂಚಿಸಲಾಯಿತು. ಅಲ್ಲದೇ ಪ್ರಸ್ತುತ ದೇವದಾಸಿ ಮಹಿಳೆಯರಿಗೆ ಇರುವ ಪುನರ್ವಸತಿ ಯೋಜನೆಗಳಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ಅಂಕಿ ಅಂಶಗಳನ್ನು ಸಲ್ಲಿಸಲು ಸೂಚಿಸಿದರು.

**ಕ್ರಮ: ಕರ್ನಾಟಕ ರಾಜ್ಯ ಮಹಿಳಾ ಆಯೋಗ**

9. ಕರ್ನಾಟಕ ರಾಜ್ಯ ಮಹಿಳಾ ಆಯೋಗದಲ್ಲಿ ದಾಖಲಾಗುವ ವಿವಿಧ ರೀತಿಯ ಪ್ರಕರಣಗಳ ಅಂಕಿ ಅಂಶಗಳ ಮಾಹಿತಿಯನ್ನು ನೀಡಲು ಸೂಚಿಸಲಾಯಿತು. ಸದರಿ ಅಂಕಿ ಅಂಶಗಳ ಪ್ರಕರಣಗಳ ಮಾಹಿತಿಯನ್ನು ಆನ್‌ಲೈನ್ ಡೇಟಾಬೇಸ್‌ನಲ್ಲಿ ನಿರ್ವಹಣೆ ಮಾಡಲು ಸೂಚಿಸುತ್ತಾ ಈ ಬಗ್ಗೆ ಸರ್ಕಾರದ ಸಂಸ್ಥೆKeonics ರವರ ಮೂಲಕ ಅಭಿವೃದ್ಧಿಪಡಿಸಲು ಸೂಚಿಸಲಾಯಿತು.

**ಕ್ರಮ: ಕರ್ನಾಟಕ ರಾಜ್ಯ ಮಹಿಳಾ ಆಯೋಗ**

10. ಅಪಾಯದಲ್ಲಿರುವ ಅಥವಾ ಸಂಕಷ್ಟದಲ್ಲಿರುವ ದುರ್ಬಲ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣದ ರಕ್ಷಣೆ ನೀಡಲು ಗೃಹ ಇಲಾಖೆಯಿಂದ ರಚಿಸಲ್ಪಟ್ಟ ಅಕ್ಕ ಪಡೆ ಯಶಸ್ಸನ್ನು ಪರಿಗಣಿಸಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಮಹಿಳಾ National Cadet Corps (NCC) ಒಳಗೊಂಡ ಅಕ್ಕ ಪಡೆಯನ್ನು ರಚಿಸಿರುತ್ತದೆ. ಇದೇ ಮಾದರಿಯಲ್ಲಿ ಮಕ್ಕಳ ರಕ್ಷಣೆಗಾಗಿ ಬಾಲ್ಯ ರಕ್ಷಣಾ ಪಡೆಯನ್ನು ರಚಿಸಲು National Cadet Corps (NCC) ಹಾಗೂ National Service Scheme (NSS) ಗಳಲ್ಲಿರುವ ವಿದ್ಯಾರ್ಥಿಗಳನ್ನು ಪೊಲೀಸ್ ಠಾಣೆಗಳಲ್ಲಿ ನೋಂದಣಿ ಮಾಡಿ ಬಾಲ್ಯ ರಕ್ಷಣಾ ಪಡೆಯನ್ನು ರಚಿಸಲು ಕ್ರಮವಹಿಸುವುದು

**ಕ್ರಮ:ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಒಳಾಡಳಿತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.**

11. ಗ್ರಾಮ ಮತ್ತು ಸ್ಥಳೀಯ ಮಟ್ಟದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ವರದಿ ಮಾಡಲು ಮಹಿಳೆಯರ ಹೆಸರು, ವಿಳಾಸ ಮತ್ತು ದೂರಿನ ವಿವರಗಳನ್ನೊಳಗೊಂಡ Template ಗಳನ್ನು ಹೊರಡಿಸಿ NLM ಗಳ ಮೂಲಕ SHG ಗಳಿಗೆ ನೀಡಲು ಸೂಚಿಸಲಾಯಿತು. ಸದರಿ SHG's ಗಳುಸ್ಥಳೀಯವಾಗಿ ಒನ್ ಸ್ಟಾಪ್ ಸೆಂಟರ್, CDPO ಮೂಲಕ ಸಹಾಯ ಪಡೆದು ಸೇವೆ ಒದಗಿಸುವುದು ಅಲ್ಲದೇಮಹಿಳಾ ಸಹಾಯವಾಣಿ-181 ಗೆ ಕರೆ ಮಾಡಿ ಸೇವೆ ಪಡೆಯಬಹುದಾಗಿ ತಿಳಿಸಲಾಯಿತು.

**ಕ್ರಮ: MD, NLM & ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ**

12.ಮಹಿಳೆಯರ ಮತ್ತು ಮಕ್ಕಳ ಮೇಲಿನ ದೌರ್ಜನ್ಯ ಕಡಿಮೆ ಮಾಡಲು ರಾಷ್ಟ್ರೀಯ ಜೀವನೋಪಾಯ ಅಭಿಯಾನ (NLM), ಕಾನೂನು ಸೇವಾ ಪ್ರಾಧಿಕಾರ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ

ಇಲಾಖೆಯ ಸಹಯೋಗದೊಂದಿಗೆ ಮಕ್ಕಳ ಸಹಾಯವಾಣಿ-1098, ಮಹಿಳಾ ಸಹಾಯವಾಣಿ-181 ಮತ್ತು ಟೆಲಿ ಮಾನಸ್ ಸಹಾಯವಾಣಿ 14416 ಗಳ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಲಾಯಿತು.

**ಕ್ರಮ: MD, NLM & ಗೃಹ ಇಲಾಖೆ**

13. ಮಕ್ಕಳ ಮೇಲಿನದೌರ್ಜನ್ಯ, ಅತ್ಯಾಚಾರ ಪ್ರಕರಣಗಳಿಗೆ ಸಂಬಂಧಿಸಿದಂತೆ, ನ್ಯಾಯಾಲಯವನ್ನು ಮಕ್ಕಳ ಸ್ನೇಹಿಯಾಗಿ ಪರಿವರ್ತಿಸುವ ಬಗ್ಗೆ ಚರ್ಚಿಸಲಾಗಿದ್ದು, ಈಗಾಗಲೇ 30 ಜಿಲ್ಲೆಗಳಲ್ಲಿಯೂ ಪೋಕ್ಸೊ ನ್ಯಾಯಾಲಯಗಳಲ್ಲಿ ಪ್ರತ್ಯೇಕವಾದ ಪ್ರವೇಶ ದ್ವಾರ, ಮಕ್ಕಳ ಸ್ನೇಹಿ ವಾತಾವರಣ ಮತ್ತು ವೀಡಿಯೋ ಕಾನ್ಫರೆನ್ಸ್ ಸೌಲಭ್ಯ ಲಭ್ಯವಿರುವ ಬಗ್ಗೆ ತಿಳಿಸಲಾಯಿತು.

**ಕ್ರಮ: ಗೃಹ ಇಲಾಖೆ.**

14. ಬಾಲ್ಯವಿವಾಹ ನಿಷೇಧ ಪ್ರಕರಣಗಳನ್ನು ಕೂಡಪೋಕ್ಸೊ ನ್ಯಾಯಾಲಯಗಳಲ್ಲಿ ಹಾಜರುಪಡಿಸಿ ಅತೀ ಶೀಘ್ರವಾಗಿ ಇತ್ಯರ್ಥ ಮಾಡಲು ಕ್ರಮವಹಿಸುವ ಕುರಿತು ಈಗಾಗಲೇ ಕಾನೂನು ಇಲಾಖೆಗೆ ಕಡತ ಮಂಡಿಸಲಾಗಿದ್ದು, ಈ ಕುರಿತು Registrar General ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯರವರ ಅಭಿಪ್ರಾಯ ಕೋರಿ ಕಾನೂನು ಇಲಾಖೆಯಿಂದ ಕಡತ ಸಲ್ಲಿಸಿರುವ ಬಗ್ಗೆ ತಿಳಿಸಲಾಯಿತು. ಈ ಕುರಿತು ಅನುಸರಣೆ ಮಾಡಿ ಶೀಘ್ರವಾಗಿ ಕ್ರಮವಹಿಸುವಂತೆ ಕಾನೂನು ಇಲಾಖೆಗೆ ಸೂಚಿಸಲಾಯಿತು.

**ಕ್ರಮ: ಕಾನೂನು ಇಲಾಖೆ.**

15. ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಿದ ಬಾಲಕಾರ್ಮಿಕರ ಮಾಹಿತಿಯನ್ನು ಭಾರತ ಸರ್ಕಾರದ ಮಿಷನ್ ವಾತ್ಸಲ್ಯ ಪೋರ್ಟಲ್ ನಲ್ಲಿ ದಾಖಲಿಸಲಾಗುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಸದರಿ ಪೋರ್ಟಲ್ ನ್ನು ಪರಿಶೀಲಿಸುವಂತೆ ಹಾಗೂ ಕಾರ್ಮಿಕ ಇಲಾಖೆಯಿಂದ ಈ ಉದ್ದೇಶಕ್ಕೋಸ್ಕರ ಪ್ರತ್ಯೇಕವಾದ ಪೋರ್ಟಲ್ ಅನ್ನು ಅಭಿವೃದ್ಧಿಪಡಿಸುವ ಅವಶ್ಯಕತೆ ಬಗ್ಗೆ ಸ್ಪಷ್ಟೀಕರಣ ನೀಡುವಂತೆಸೂಚಿಸಲಾಯಿತು.

**ಕ್ರಮ: ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ**

16. ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳು ಬಾಲ್ಯವಿವಾಹ, ಲೈಂಗಿಕ ದೌರ್ಜನ್ಯ ಮತ್ತು ಇತರೆ ದೌರ್ಜನ್ಯಗಳು ಹೆಚ್ಚುತ್ತಿರುವಕುರಿತು ಅಂಕಿ-ಅಂಶಗಳೊಂದಿಗೆ ಮಾಹಿತಿಯನ್ನು ಒದಗಿಸಲು ಸೂಚಿಸಲಾಯಿತು.

**ಕ್ರಮ: ಗೃಹ ಇಲಾಖೆ.**

ಮೇಲ್ಕಂಡ ಅಂಶಗಳಿಗೆ ಅನುಪಾಲನೆಯನ್ನು ಒದಗಿಸುವಂತೆ ಹಾಗೂ ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುವಂತೆ ಸೂಚಿಸಲಾಯಿತು.

ವಂದನೆಗಳೊಂದಿಗೆ ಸಭೆಯು ಮುಕ್ತಾಯವಾಯಿತು.

**(ಡಾ. ಶಾಲಿನಿ ರಜನೀಶ್)**
ಮುಖ್ಯ ಕಾರ್ಯದರ್ಶಿ

## ಕರ್ನಾಟಕ ಸರ್ಕಾರ

ಸಂಖ್ಯೆ: ವೈಎಸ್‌ಡಿ-ಸಿಡಿಎನ್/218/2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:03.12.2025

## ಅಧಿಸೂಚನೆ

ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ-4(1)(ಎ) ಪ್ರಕಾರ 2024ನೇ ಸಾಲಿನ ಡಿಸೆಂಬರ್ ಮಾಹೆಯ ಅಂತ್ಯಕ್ಕೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯನಿರ್ವಹಣೆಯ ಘೋಷಣೆ.

ಇಲಾಖೆಯಲ್ಲಿ ನಿರ್ವಹಿಸುವ ವಿಷಯಗಳು:

1. ಸ್ವೀಕೃತಿ ಮತ್ತು ರವಾನ, ಸಮನ್ವಯ ಶಾಖೆ

- ಇಲಾಖೆಗೆ ಬರುವ ಕಾಗದ ಪತ್ರಗಳನ್ನು ಸ್ವೀಕರಿಸಿ, ದಾಖಲಿಸಿ ಸಂಬಂಧಪಟ್ಟ ಅಧಿಕಾರಿ/ಶಾಖೆಗಳಿಗೆ ಕಳುಹಿಸಿಕೊಡುವುದು.
- ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯಕ್ಕೆ ಸಂಬಂಧಿಸಿದ ಸೇವಾ ವಿಷಯಗಳು ಹಾಗೂ ಇದಕ್ಕೆ ಸಂಬಂಧಿಸಿದಂತೆ ವಿದಾನಸಭೆ/ವಿಧಾನಪರಿಷತ್ ಪ್ರಶ್ನೆಗಳು, ಭರವಸೆಗಳು, ಅರ್ಜಿಗಳು, ಗಮನ ಸೆಳೆಯುವ ಸೂಚನೆಗಳು ಇತ್ಯಾದಿಗಳಿಗೆ ಮಾಹಿತಿ ನೀಡುವುದು ಹಾಗೂ ನ್ಯಾಯಾಲಯ ಪ್ರಕರಣಗಳನ್ನು ಕುರಿತ ಕಾರ್ಯಗಳ ನಿರ್ವಹಣೆ
- ಮಾಹಿತಿ ಹಕ್ಕು ಅರ್ಜಿಗೆ ಸಂಬಂಧಿಸಿದಂತೆ ಮಾಹಿತಿ ನೀಡುವುದು, ವಾರ್ಷಿಕ ವರದಿ ತಯಾರಿಕೆ ಇಲಾಖೆಗೆ ಸಂಬಂಧಿಸಿದ ಇತರ ಸಮನ್ವಯ ಕಾರ್ಯಗಳು.
- ಇಲಾಖೆಯ ಎಲ್ಲಾ ಶಾಖೆಗಳಿಂದ ಸರ್ಕಾರದ ಇತರ ಇಲಾಖೆ/ಕಛೇರಿ/ವ್ಯಕ್ತಿಗಳಿಗೆ ಸಂಭೋದಿತವಾದ ಪತ್ರ/ಅಧಿಸೂಚನೆ/ಆದೇಶ ಇತ್ಯಾದಿಗಳನ್ನು ರವಾನಿಸುವುದು.
- ಇಲಾಖೆಗೆ ಅವಶ್ಯವಾದ ಲೇಖನ ಸಾಮಗ್ರಿಗಳನ್ನು ಮುದ್ರಾಣಾಲಯದಿಂದ ಪಡೆದು ವಿತರಿಸುವುದು.
- ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸಂಬಂಧಿಸಿದ ಮಾಹಿತಿ ಕ್ರೋಢೀಕರಣ/ಸಮನ್ವಯ ಕೆಲಸಗಳು.
- ಶಾಖೆಯಲ್ಲಿ ಕಳುಹಿಸಿಕೊಡುವ ಸಾಮಾನ್ಯ ಪತ್ರ/ಅಧಿಸೂಚನೆ/ಆದೇಶ/ಅನಧಿಕೃತ ಟಿಪ್ಪಣಿ/ಹಿಂಬರಹ ಮುಂತಾದವುಗಳ ಬೆರಳಚ್ಚು ಕಾರ್ಯಗಳು.
- ಕರ್ನಾಟಕ ಕ್ರೀಡಾ ಪ್ರಾಧಿಕಾರಕ್ಕೆ ಸಂಬಂಧಿಸಿದ ವಿಷಯಗಳು.
- ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಗೆ ಸಂಬಂಧಿಸಿದ ವಿಷಯಗಳು.
- ಯುವ ಪ್ರಶಸ್ತಿಗಳ ಕುರಿತಾದ ವಿಷಯಗಳ ನಿರ್ವಹಣೆ,
- ಯುವ ಸ್ಪಂದನ/ಯುವ ನೀತಿ/ ಕ್ರೀಡಾ ನೀತಿ ಕಾರ್ಯಕ್ರಮಗಳ ಕುರಿತ ಇತರೆ ನೀತಿ ನಿರೂಪಣೆಗಳ ವಿಷಯಗಳು
- ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಹಲವು ಯೋಜನಾಭಿವೃದ್ಧಿ ಹಾಗೂ ಕ್ರೀಡಾಭಿವೃದ್ಧಿ ಕುರಿತಾದ ಯೋಜನೆ ಮತ್ತು ಯೋಜನೇತರ ಕಾರ್ಯಕ್ರಮಗಳ ಅನುಷ್ಠಾನ ಕುರಿತಾದ ವಿಷಯಗಳು.
- ಅಖಿಲ ಭಾರತ ನಾಗರೀಕ ಸೇವಾ ಕ್ರೀಡಾ ಪಂಧ್ಯದಲ್ಲಿ ಭಾಗವಹಿಸುವ ಸರ್ಕಾರಿ ನೌಕರರ ಆಯ್ಕೆ ಹಾಗೂ ನಿಯೋಜನೆ ಕುರಿತಾದ ಪ್ರಸ್ತಾವನೆಗಳ ನಿರ್ವಹಣೆ.

ಸ್ವೀಕರಿಸಿದೆ
828/04/12/2025
ರಾಷ್ಟ್ರೀಯ ಸೇವಾ ಯೋಜನಾ ಕೋಶ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ಕರ್ನಾಟಕ ಸರ್ಕಾರ, ಬೆಂಗಳೂರು.

- ಮೇಲ್ಕಂಡ ವಿಷಯಗಳ ನಿರ್ವಹಣೆಗೆ ನಿರ್ವಹಿಸುವ ಕಡತ/ದಾಖಲೆಗಳಲ್ಲಿ ನಿರ್ವಹಿಸುವ ಮೂರು ಅಕ್ಷರಗಳ ಸೂಚಿ ಪದಗಳು (Trilateral Index)

  ಅ) ಯುಇಸೇ/EYW

  ಆ) ಸಮನ/CDN

## 2. ಯುವ ಸಬಲೀಕರಣ ಶಾಖೆಯಲ್ಲಿ ನಿರ್ವಹಿಸುವ ಕಾರ್ಯದ ವಿವರ

- ರಾಷ್ಟ್ರೀಯ ಕ್ರೀಡೆಗಳಿಗೆ ಸಂಬಂಧಿಸಿದ ವಿಷಯಗಳು.
- ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮೀಣ ಮಟ್ಟದಲ್ಲಿ ಕ್ರೀಡಾ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತಾದ ವಿಷಯಗಳು.
- ಜಿಲ್ಲಾ ಕ್ರೀಡಾಂಗಣಗಳನ್ನು ಕ್ರೀಡಾ ಸಮುಚ್ಚಯಗಳ ನಿರ್ಮಾಣ ಕುರಿತಂತೆ / ಆಡಳಿತಾತ್ಮಕ ಅನುಮೋದನೆ ಇತ್ಯಾದಿ ವಿಷಯಗಳು. ರಾಜ್ಯ ವಲಯದಿಂದ ಅನುದಾನ ಬಿಡುಗಡೆ ಮಾಡುವ ಹಾಗೂ ಪಂಚಾಯತ್ ಯುವ ಕ್ರೀಡಾ ಔರ್ ಖೇಲ್ ಅಭಿಯಾನ (ಪೈಕಾ) ಇತ್ಯಾದಿ ಕೇಂದ್ರ ಸರ್ಕಾರದ ಸಹಾಯಾನುದಾನ ಕುರಿತಾದ ವಿಷಯಗಳು.
- ತಾಲ್ಲೂಕು ಕ್ರೀಡಾಂಗಣಗಳ ನಿರ್ಮಾಣ ಕುರಿತಂತೆ ಆಡಳಿತಾತ್ಮಕ ಅನುಮೋನದೆ ನೀಡುವ ಹಾಗೂ ಕೇಂದ್ರ ಸರ್ಕಾರದ ಸಹಾಯಾನುದಾನ ಪಡೆಯುವ ಕುರಿತಂತೆ ಪ್ರಸ್ತಾವನೆ ಸಲ್ಲಿಸುವ ಬಗೆಗಿನ ವಿಷಯಗಳು.
- ಸರ್ಕಾರಿ ವೈಮಾನಿಕ ತರಬೇತಿ ಶಾಲೆಗೆ ಸಂಬಂಧಿಸಿದ ವಿಷಯಗಳ ನಿರ್ವಹಣೆ.
- ಮೇಲಿನ ವಿಷಯಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವಿಧಾನಸಭೆ: ವಿಧಾನ ಪರಿಷತ್ ಪ್ರಶ್ನೆಗಳು, ಭರವಸೆಗಳು, ಅರ್ಜಿಗಳು, ಗಮನ ಸೆಳೆಯುವ ಸೂಚನೆಗಳು, ಇತ್ಯಾದಿ ಹಾಗೂ ನ್ಯಾಯಾಲಯ ಪ್ರಕರಣಗಳು.
- ರಾಷ್ಟ್ರೀಯ ಸೇವಾ ಯೋಜನಾ ವಿಷಯಕ್ಕೆ ಸಂಬಂಧಿಸಿದ ವಿಷಯಗಳು,
- ಮೇಲ್ಕಂಡ ವಿಷಯಗಳ ನಿರ್ವಹಣೆಗೆ ನಿರ್ವಹಿಸುವ ಕಡತ/ದಾಖಲೆಗಳಲ್ಲಿ ನಿರ್ವಹಿಸುವ ಮೂರು ಅಕ್ಷರಗಳ ಸೂಚಿ ಪದಗಳು (Trilateral Index)

  ಅ) ಯುಸಕ್ರೀ/EPE

  ಆ) ಯುರಾಸೇ/ENC

  ಇ) ಯುಸೇಭಾ/EEB

## 3. ಆಂತರಿಕ ಆರ್ಥಿಕ ಸಲಹೆಗಾರರ ವಿಭಾಗ (ಅಭಿಪ್ರಾಯ ಶಾಖೆ)

- ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸಂಬಂಧಿಸಿದ ಸೇವಾ ವಿಷಯ ಹಾಗೂ ಅನುದಾನ ಬಿಡುಗಡೆ ಇತ್ಯಾದಿ ಪ್ರಸ್ತಾವನೆಗಳಿಗೆ ಅಭಿಪ್ರಾಯ ನೀಡುವುದು.
- ಮೇಲ್ಕಂಡ ವಿಷಯಗಳ ನಿರ್ವಹಣೆಗೆ ನಿರ್ವಹಿಸುವ ಕಡತ/ದಾಖಲೆಗಳಲ್ಲಿ ನಿರ್ವಹಿಸುವ ಮೂರು ಅಕ್ಷರಗಳ ಸೂಚಿ ಪದಗಳು (Trilateral Index)

  IFW (ಐ.ಎಫ್.ಡಬ್ಲ್ಯೂ)

## 4. ಆಂತರಿಕ ಆರ್ಥಿಕ ಸಲಹೆಗಾರರ ವಿಭಾಗ (ಆಯವ್ಯಯ ಶಾಖೆ)

- ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸಂಬಂಧಿಸಿದ ಆಯವ್ಯಯ ತಯಾರಿಕೆ, ಆಡಿಟ್ ಆಕ್ಷೇಪಣೆ, ತನಿಖಾ ವರದಿ, ಸಿಎಜಿ ಕಂಡಿಕೆಗಳ ಪರಿಶೀಲನೆ.

- ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯ ಹಾಗೂ ಸರ್ಕಾರಿ ವೈಮಾನಿಕ ತರಬೇತಿ ಶಾಲೆಗೆ ಸಂಬಂದಪಟ್ಟ ಯೋಜನೆ ಮತ್ತು ಯೋಜನೇತರ ಆಯವ್ಯಯ/ಹಣಕಾಸು ವಿಷಯದ ಬಗ್ಗೆ ಅಭಿಪ್ರಾಯ ನೀಡುವಿಕೆ.
- ಆಯವ್ಯಯ ಲೆಕ್ಕಶೀರ್ಷಿಕೆಗೆ ಸಂಬಂಧಿಸಿದ ನೀಡುವಿಕೆ,
- ಮೇಲ್ಕಂಡ ವಿಷಯಗಳ ನಿರ್ವಹಣೆಗೆ ನಿರ್ವಹಿಸುವ ಕಡತ/ದಾಖಲೆಗಳಲ್ಲಿ ನಿರ್ವಹಿಸುವ ಮೂರು ಅಕ್ಷರಗಳ ಸೂಚಿ ಪದಗಳು (Trilateral Index)

IFW (ಐ.ಎಫ್.ಡಬ್ಲ್ಯೂ)

5. ರಾಷ್ಟ್ರೀಯ ಸೇವಾ ಯೋಜನಾ ಕೋಶ

- ರಾಜ್ಯದ ಎಲ್ಲಾ ವಿಶ್ವವಿದ್ಯಾಲಯ ನಿರ್ದೇಶನಾಲಯಗಳು ಎನ್.ಎಸ್.ಎಸ್. ಚಟುವಟಿಕೆಗಳ ಮೇಲ್ವಿಚಾರಣೆ ಮತ್ತು ನಿಯಂತ್ರಣ..
- ವಿಶ್ವವಿದ್ಯಾಲಯ/ನಿರ್ದೇಶನಾಲಯಗಳಿಗೆ ಎನ್.ಎಸ್.ಎಸ್. ಚಟುವಟಿಕೆಗಳಿಗೆ ಅನುದಾನ ಬಿಡುಗಡೆ.
- ವಿಶ್ವವಿದ್ಯಾಲಯ/ನಿರ್ದೇಶನಾಲಯಗಳ ಎನ್.ಎಸ್.ಎಸ್. ಸಲಹಾ ಸಮಿತಿ ಸಭೆ; ವಿಚಾರ ಸಂಕೀರ್ಣ, ಕಾರ್ಯಾಗಾರ ಇತರೆ ಕಾರ್ಯಕ್ರಮಗಳಿಗೆ ಸರ್ಕಾರದ ಪರವಾಗಿ ಭಾಗವಹಿಸುವುದು.
- ಸರ್ಕಾರದ ನಿಯಮಾವಳಿಗಳ ರೀತ್ಯಾ ಅನುದಾನವನ್ನು ಬಳಕೆ ಮಾಡಲಾಗಿದೆಯೇ ಎಂಬ ಬಗ್ಗೆ ಪರಿವೀಕ್ಷಣೆ ಮಾಡುವುದು.
- ಲೆಕ್ಕ ಪತ್ರದ ವರದಿಗಳು, ಕಾರ್ಯಕ್ರಮಗಳ ವರದಿಗಳು ಕಾಲಾನುಕಾಲಕ್ಕೆ ಬರುವಂತೆ ನೋಡಿಕೊಳ್ಳುವುದು.
- ರಾಜ್ಯಮಟ್ಟದ ಎನ್.ಎಸ್.ಎಸ್. ಸಲಹಾ ಸಮಿತಿ ಸಭೆಯನ್ನು ಏರ್ಪಡಿಸುವುದು.
- ಅಂತರ ಇಲಾಖಾ ಕಾರ್ಯಕ್ರಮಗಳನ್ನು ಆಯೋಜಿಸುವುದು ಉದಾ:

ಅ) ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆಯೊಂದಿಗೆ ರಾಷ್ಟ್ರೀಯ ಕೋಟೆ, ಸ್ಮಾರಕಗಳ ರಕ್ಷಣೆ

ಆ) ಕ್ರೆಡಿಲ್‌ನ ಸಹಯೋಗದೊಂದಿಗೆ ಎನರ್ಜಿ ಕ್ಲಬ್‌ಗಳನ್ನು ಕಾಲೇಜುಗಳಲ್ಲಿ ಸ್ಥಾಪನೆ ಮಾಡುವುದು,

ಇ) ರಾಜ್ಯ ಏಡ್ ಸೊಸೈಟಿಯೊಂದಿಗೆ ಕಾಲೇಜು ಏಡ್ಸ್ ಶಿಕ್ಷಣ ಕಾರ್ಯಕ್ರಮ (ಎಲ್ಲಾ ಕಾಲೇಜುಗಳಲ್ಲಿ),

ಈ) ಉಚಿತ ಕಾನೂನು ನೆರವು ಶಿಬಿರಗಳು, ಕಾರ್ಯಾಗಾರಗಳು, ವಿಪತ್ತು ನಿರ್ವ ಹಣಾ ಕಾರ್ಯಕ್ರಮ,

ಉ) ಇನ್ನಿತರ ಕಾರ್ಯ ಕ್ರಮಗಳನ್ನು ಆಯಾ ಕಾಲಕ್ಕನುಗುಣವಾಗಿ ಏರ್ಪಡಿಸುವುದು.

- ರಾಜ್ಯಮಟ್ಟದ ಕಾರ್ಯಕ್ರಮಗಳಾದ ಗಣರಾಜ್ಯೋತ್ಸವದ ಪಥ ಸಂಚಲನ ತರಬೇತಿ, ಪಥ ಸಂಚಲನದಲ್ಲಿ ಭಾಗವಹಿಸುವುದು, ರಾಜ್ಯಮಟ್ಟದ ಎನ್.ಎಸ್.ಎಸ್. ವಿಚಾರ ಸಂಕೀರ್ಣಗಳು ಹಾಗೂ ಇತರೆ ರಾಜ್ಯಮಟ್ಟದ ಶಿಬಿರಗಳನ್ನು ಸಂಘಟಿಸುವುದು.
- ಅನುದಾನಕ್ಕೆ ಸಂಬಂಧಿಸಿದಂತೆ, ಲೆಕ್ಕ ಪರಿಶೋಧನೆ ಹಾಗೂ ಇತರೆ ವರದಿಗಳನ್ನು ಕ್ರೋಢೀಕರಿಸಿ ಮಹಾಲೇಖಪಾಲರು ಮತ್ತು ಕೇಂದ್ರ ಸರ್ಕಾರಕ್ಕೆ ಸಲ್ಲಿಸುವುದು,
- ಎಲ್ಲಾ ವಿಶ್ವವಿದ್ಯಾಲಯ: ನಿರ್ದೇಶನಾಲಯಗಳು ಎನ್.ಎಸ್.ಎಸ್. ಸಂಯೋಜನಾಧಿಕಾರಿಗಳ

ನೇಮಕಾತಿ ಸಮಿತಿ ಸಭೆಯಲ್ಲಿ ಭಾಗವಹಿಸುವುದು,

- ಮೇಲ್ಕಂಡ ವಿಷಯಗಳ ನಿರ್ವಹಣೆಗೆ ನಿರ್ವಹಿಸುವ ಕಡತ/ದಾಖಲೆಗಳಲ್ಲಿ ನಿರ್ವಹಿಸುವ ಮೂರು ಅಕ್ಷರಗಳ ಸೂಚಿ ಪದಗಳು (Trilateral Index)

NSS (ರಾಸೇಯೋ).

ಮೇಲ್ಕಂಡ ಶಾಖೆಗಳಲ್ಲಿ ಸೃಷ್ಟಿಸಿ ಮುಕ್ತಾಯಗೊಂಡಿರುವ ಕಡತದ ವಿವರಗಳನ್ನು ಇದರೊಂದಿಗೆ ಲಗತ್ತಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Digitally signed by
JAHEEDA N GACHHINMAHAL
Date: 03-12-2025 16:48:38

**(ಜಹೀದಾ ಎನ್. ಗಚ್ಚಿನಮಹಲ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಇವರಿಗೆ:

1. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ), ಬಹುಮಹಡಿ ಕಟ್ಟಡ, ಬೆಂಗಳೂರು,
2. ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯ, ನೃಪತುಂಗ ರಸ್ತೆ, ಬೆಂಗಳೂರು,
3. ನಿರ್ದೇಶಕರು, ಸರ್ಕಾರಿ ವೈಮಾನಿಕ ತರಬೇತಿ ಶಾಲೆ, ಜಕ್ಕೂರು, ಬೆಂಗಳೂರು,
4. ಕಾರ್ಯದರ್ಶಿ, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಡಿ, ದೇವರಾಜು ಅರಸು ರಸ್ತೆ, ವಿಧಾನಸೌಧ ಪಶ್ಚಿಮ ದ್ವಾರ (2)ರ ಎದುರು, ಬೆಂಗಳೂರು 560001,
5. ಆಂತರಿಕ ಆರ್ಥಿಕ ಸಲಹೆಗಾರರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು,
6. ರಾಜ್ಯ ಎನ್ .ಎಸ್. ಎಸ್ ಅಧಿಕಾರಿಗಳು, ಎನ್.ಎಸ್.ಎಸ್.ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು..
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
8. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಎಲ್ಲಾ ಪೀಠಾಧಿಕಾರಿ ಶಾಖಾಧಿಕಾರಿಗಳು.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸೂಚನಾ ಫಲಕ.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ